**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 790 ಗ್ರಾಪಂಅ 2015(ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 12.07.2017

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

**ವಿಷಯ:** ದಿನಾಂಕ 31.03.2015 ರವರೆಗಿನ ಗ್ರಾಮ ಪಂಚಾಯತಿಗಳ ಬೀದಿದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ವಿದ್ಯುತ್ ಬಿಲ್‌ಗಳನ್ನು ತೀರುವಳಿ ಮಾಡಿರುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 790 ಗ್ರಾಪಂಅ 2016, ದಿನಾಂಕ 19.11.2015, 06.01.2016, 14.01.2016, 12.02.2016
2) ಇಂಧನ ಇಲಾಖೆಯ ಆದೇಶ ಸಂಖ್ಯೆ: ಇಎನ್ 3 ಪಿಎಸ್‌ಆರ್ 2016/ಪಿ3, ದಿನಾಂಕ 31.03.2017

***

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಬೀದಿ ದೀಪಗಳು ಹಾಗೂ ಕುಡಿಯುವ ನೀರು ಸ್ಥಾವರಗಳ ವಿದ್ಯುತ್ ಬಿಲ್ಲುಗಳನ್ನು ಸಂಬಂಧಪಟ್ಟ ಎಸ್ಕಾಂಗಳಿಗೆ ಸಕಾಲಕ್ಕೆ ಪಾವತಿಸದೆ ಬಾಕಿ ಉಳಿಸಿಕೊಳ್ಳುತ್ತಿದ್ದುದರಿಂದ, ದಿನಾಂಕ 21.01.2015 ರ ಸಚಿವ ಸಂಪುಟ ಟಿಪ್ಪಣಿಯನ್ವಯ ಸರ್ಕಾರದ ವತಿಯಿಂದ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾಗುತ್ತಿರುವ ಶಾಸನಬದ್ಧ ಅನುದಾನದಲ್ಲಿ ಶೇ.60 ರಷ್ಟು ಅನುದಾನ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುವ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನ ಹಾಗೂ ಸಾಮಾನ್ಯ ನಿರ್ವಹಣಾ ಅನುದಾನದಿಂದ ಶೇ.25% ರಷ್ಟು ಮೊತ್ತವನ್ನು ನೇರವಾಗಿ ಎಸ್ಕ್ರೋ ಖಾತೆ ಮೂಲಕ ಪಾವತಿಸಲಾಗುತ್ತಿದೆ.

ಗ್ರಾಮ ಪಂಚಾಯತಿಗಳಲ್ಲಿ ಬಾಕಿ ಇರುವ ವಿದ್ಯುತ್ ಬಿಲ್‌ಗಳನ್ನು ದಿನಾಂಕ 31.03.2014 ರವರೆಗೆ ಲೆಕ್ಕ ಸಮನ್ವಯಗೊಳಿಸಿ, ಮಾರ್ಚ್ 2014 ರ ಅಂತ್ಯದವರೆಗಿನ ವಿದ್ಯುತ್ ಬಿಲ್‌ಗಳನ್ನು ತೀರುವಳಿ ಮಾಡುವ ಬಗ್ಗೆ ಸರ್ಕಾರದ ಹಂತದಲ್ಲಿ ಕ್ರಮವಹಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದ್ದರಿಂದ ದಿನಾಂಕ 01.01.2014 ರ ನಂತರದ ವಿದ್ಯುತ್ ಬಿಲ್‌ಗಳನ್ನು ಮಾತ್ರ ಗ್ರಾಮ ಪಂಚಾಯತಿಗಳು ಸಂಬಂಧಪಟ್ಟ ಎಸ್ಕಾಂಗಳಿಗೆ ಪಾವತಿಸಲು ಉಲ್ಲೇಖ (1) ರ ಸರ್ಕಾರದ ಪತ್ರಗಳಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲಾಗಿತ್ತು.

ಮುಂದುವರೆದು, ರಾಜ್ಯದ ಗ್ರಾಮ ಪಂಚಾಯತಿಗಳು ವಿದ್ಯುತ್ ಬಿಲ್ಲುಗಳನ್ನು ಸಂಪೂರ್ಣವಾಗಿ ಸಕಾಲಕ್ಕೆ ಪಾವತಿಸದೆ ಬಾಕಿ ಉಳಿಸಿಕೊಳ್ಳುತ್ತಿದ್ದ ಹಿನ್ನೆಲೆಯಲ್ಲಿ, ದಿನಾಂಕ 31.03.2015 ಕ್ಕೆ ಬಾಕಿ ಇದ್ದ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಹಾಗೂ ಕುಡಿಯುವ ನೀರು ಸ್ಥಾವರಗಳ ವಿದ್ಯುತ್ ಬಿಲ್ ಬಾಕಿ ಒಟ್ಟು ರೂ.3766.81 ಕೋಟಿಗಳನ್ನು (ಬಡ್ಡಿ ಸೇರಿ) ಷರತ್ತುಗಳ ಆಧಾರದ ಮೇಲೆ ತೀರುವಳಿ ಮಾಡಲು ದಿನಾಂಕ 10.01.2017 ರ ಸಚಿವ ಸಂಪುಟ ಟಿಪ್ಪಣಿಯಲ್ಲಿ ಅನುಮೋದನೆಯನ್ವಯ ಇಂಧನ ಇಲಾಖೆಯೊಡನೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಈ ಸಂಬಂಧ ಮಾರ್ಚ್ 2015 ರ ಅಂತ್ಯಕ್ಕೆ ಬಾಕಿ ಇದ್ದ ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್‌ಗಳನ್ನು (ಬಡ್ಡಿ ಸೇರಿ) ತೀರುವಳಿ ಮಾಡಿರುವ ಬಗ್ಗೆ ಉಲ್ಲೇಖ (2) ರಲ್ಲಿ ಇಂಧನ ಇಲಾಖೆಯು ಆದೇಶ ಹೊರಡಿಸಿದೆ.

**ಈ ಹಿನ್ನೆಲೆಯಲ್ಲಿ, ದಿನಾಂಕ 10.01.2017 ರ ಸಚಿವ ಸಂಪುಟ ಟಿಪ್ಪಣಿಯನ್ವಯ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಸರ್ಕಾರದಿಂದ ವಿದ್ಯುತ್ ಬಿಲ್ ಪಾವತಿಗಾಗಿ ಎಸ್ಕ್ರೋ ಖಾತೆಗೆ ಬಿಡುಗಡೆ ಆಗುತ್ತಿರುವ ಅನುದಾನ ಮತ್ತು ಗ್ರಾಮ ಪಂಚಾಯತಿಗಳ ಸ್ವಂತ ಅನುದಾನದಿಂದ ದಿನಾಂಕ 01.04.2015 ರ ನಂತರದ ವಿದ್ಯುತ್ ಬಿಲ್‌ಗಳನ್ನು ಗ್ರಾಮ**

ಪಂಚಾಯತಿಗಳು ಕಡ್ಡಾಯವಾಗಿ ನಿಗಧಿತ ಸಮಯದಲ್ಲಿ ಸಂಬಂಧಪಟ್ಟ ಎಸ್ಕಾಂಗಳಿಗೆ ಪಾವತಿಸಬೇಕು. ಈ ಬಗ್ಗೆ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಅಧ್ಯಕ್ಷರುಗಳಿಗೆ ಕಟ್ಟು ನಿಟ್ಟಿನ ಸೂಚನೆಗಳನ್ನು ನೀಡಲು ತಿಳಿಸಿದೆ. ಎಸ್ಕಾಂಗಳು ನೀಡುವ ಬಿಲ್ಲಿನ ಮೊತ್ತ ಹಾಗೂ ಬಡ್ಡಿ ಮೊತ್ತದಲ್ಲಿ ವ್ಯತ್ಯಗಳು ಕಂಡು ಬಂದರೆ ತಕ್ಷಣವೇ ಎಸ್ಕಾಂ ಕಛೇರಿಗೆ ಭೇಟಿ ನೀಡಿ, ಪಾವತಿಸಬೇಕಾದ ಬಿಲ್ಲಿನ ಮೊತ್ತವನ್ನು ಖಚಿತಪಡಿಸಿಕೊಳ್ಳುವಂತೆ ಸೂಚಿಸಿದೆ. ಪ್ರತಿ ತಿಂಗಳ ವಿದ್ಯುತ್ ಬಿಲ್ ಪಾವತಿ ಬಗ್ಗೆ ಪ್ರತ್ಯೇಕ ವಹಿಯನ್ನು ನಿರ್ವಹಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ. ವಿದ್ಯುತ್ ಬಿಲ್‌ಗಳ ಪಾವತಿಗೆ ಆದ್ಯತೆಯನ್ನು ನೀಡಬೇಕಾಗಿದೆ. ಯಾವುದೇ ವ್ಯತ್ಯಯಗಳಿಗೆ ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಅಧ್ಯಕ್ಷರ ವಿರುದ್ಧ ಕರ್ತವ್ಯಲೋಪದ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು.

ದಿನಾಂಕ **31.03.2015** ಕ್ಕಿಂತ ಮುಂಚಿನ ವಿದ್ಯುತ್ ಬಿಲ್ ಮತ್ತು ಬಡ್ಡಿಯನ್ನು ಗ್ರಾಮ ಪಂಚಾಯತಿಗಳು ಈಗಾಗಲೇ ಸಂಬಂಧಪಟ್ಟ ಎಸ್ಕಾಂಗಳಿಗೆ ಪಾವತಿಸಿದ್ದಲ್ಲಿ, ಅಂತಹ ಗ್ರಾಮ ಪಂಚಾಯತಿಗಳು ಸಂಬಂಧಪಟ್ಟ ಎಸ್ಕಾಂಗಳೊಡನೆ ಸಮಾಲೋಚಿಸಿ, ಆ ಮೊತ್ತವನ್ನು ದಿನಾಂಕ **31.03.2015** ರ ನಂತರದ ವಿದ್ಯುತ್ ಬಿಲ್‌ಗಳಿಗೆ ಹೊಂದಾಣಿಕೆ ಮಾಡಲು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಕ್ರಮವಹಿಸುವುದು. ಈ ಸಂಬಂಧ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಉಸ್ತುವಾರಿ ಮಾಡುವುದು.

ಮೇಲಿನಂತೆ ಕ್ರಮವಹಿಸಲು ವಿಫಲರಾಗುವ, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ತಮ್ಮ ಹಂತದಲ್ಲಿಯೇ ಶಿಸ್ತು ಕ್ರಮ ಜರುಗಿಸುವುದು ಮತ್ತು ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು ಹಾಗೂ ಗ್ರಾಮ ಪಂಚಾಯತಿ ಅಧ್ಯಕ್ಷರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

ನಿಮ್ಮ ನಂಬುಗೆಯ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:**

1) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಮಾಹಿತಿಗಾಗಿ:**

1) ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
2) ಪ್ರಧಾನ ಕಾರ್ಯದರ್ಶಿಗಳು, ಇಂಧನ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3) ಕಾರ್ಯದರ್ಶಿ(ಬಿ ಮತ್ತು ಆರ್), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4) ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುಚ್ಛಕ್ತಿ ಕಂಪನಿ, ಕೆ.ಆರ್.ವೃತ್ತ, ಬೆಂಗಳೂರು.
8) ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುಚ್ಛಕ್ತಿ ಕಂಪನಿ, ಪಿ.ಬಿ.ರಸ್ತೆ, ನವನಗರ, ಹುಬ್ಬಳ್ಳಿ.
9) .ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗ ವಿದ್ಯುಚ್ಛಕ್ತಿ ಕಂಪನಿ, ಸ್ಟೇಷನ್ ರಸ್ತೆ, ಕಲಬುರಗಿ.
10) ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುಚ್ಛಕ್ತಿ ಕಂಪನಿ, ಎ.ಬಿ.ಶೆಟ್ಟಿ ವೃತ್ತ, ಮಂಗಳೂರು.
11) ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಕಂಪನಿ, ನಂ.927, ಎಲ್‌ಜೆ ಅವೆನ್ಯೂ, ನ್ಯೂ ಕಾಂತರಾಜ ಅರಸ್ ರಸ್ತೆ, ಸರಸ್ವತಿಪುರಂ, ಮೈಸೂರು.
12) ಹುಕ್ಕೇರಿ ವಿದ್ಯುಚ್ಛಕ್ತಿ ಕಂಪನಿ, ಹುಕ್ಕೇರಿ, ಬೆಳಗಾವಿ ಜಿಲ್ಲೆ.